**<u>ದಿನಾಂಕ 09-07-2024 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಶ್ರೀ.ಬಿ. ಬಿ. ವಾದಿ ಪರ ವಕೀಲರಿಂದಃಃ</u>**

ನಾನು ವಾದಿ ಇದ್ದು , ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ.

ಸಾಕ್ಷಿಯು ದಿ. 10-10-2018 ರ ದಾನ ಪತ್ರದ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1 ಎಂದು, ಸಾಕ್ಷಿಯು ಋಣಭಾರ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-2 ಎಂದು, ಹಿಸ್ಸಾ ನಕಲು ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಎಂದು, ಸಾಕ್ಷಿಯು ಸರ್ವೆ ನಂ.609 ರ ಕ್ರಮಾಂಕ 10 ನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು, ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಪುರಸ್ಕರಿಸಬೇಕೆಂದು ಕೋರಿರುತ್ತಾರೆ.

**<u>ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಪಾಟೀಸವಾಲಿಗೆ ಸಮಯ ಕೋರಿದ್ದು, ಪ್ರತಿವಾದ ಪತ್ರವನ್ನು ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಿಂಧನೂರು.

This is a True Copy of the Court Records Online. Authenticated @ districts.ecourtsindia.com/cnr/KARC510010792024/truecopy/order-3.pdf